ದೇವರ ಹಿಪ್ಪರಗಿ ಕ್ಷೇತ್ರ ಆರೋಗ್ಯ ಕೇಂದ್ರದ ಸಿಬ್ಬಂದಿ ಮತ್ತು ನಿರ್ವಹಣೆ

436 (603) ಶ್ರೀ ಪಾಟೀಲ್ ಎ.ಎಸ್. (ನಡಹಳ್ಳಿ) ದೇವರ ಹಿಪ್ಪರಗಿ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆ ದೇವರ ಹಿಪ್ಪರಗಿ ಕ್ಷೇತ್ರ ವ್ಯಾಪ್ತಿಯಲ್ಲಿರುವ ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಉಪಕೇಂದ್ರಗಳ ಸಂಖ್ಯೆ ಎಷ್ಟು (ಗ್ರಾಮವಾರು ವಿವರ ನೀಡುವುದು);

ಆ) ಈ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ಡಿ ಗ್ರೂಪ್ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಎಷ್ಟು ಸಿಬ್ಬಂದಿಗಳ ಕೊರತೆ ಇದೆ ಪೂರ್ಣ ಮಾಹಿತಿ ನೀಡುವುದು;

ಈ) ಈ ಆಸ್ಪತ್ರೆಗಳು ನಿರ್ವಹಣೆ ಇಲ್ಲದೆ ರೋಗಿಗಳಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಸಿಬ್ಬಂದಿ ಕೊರತೆ ಆಸ್ಪತ್ರೆಗಳು ಸರಿಯಾದ ನಿರ್ವಹಣೆ ಇಲ್ಲದೆ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಕೈಗೊಂಡ ಕ್ರಮವೇನು?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಬಿಜಾಪುರ ಜಿಲ್ಲೆಯ ದೇವರ ಹಿಪ್ಪರಗಿ ಕ್ಷೇತ್ರದ ವ್ಯಾಪ್ತಿಯಲ್ಲಿ ಒಂದು ಸಮುದಾಯ ಆರೋಗ್ಯ ಕೇಂದ್ರ, 10 ಪ್ರಾಥಮಿಕ ಆರೋಗ್ಯ ಕೇಂದ್ರಗಳು, 48 ಉಪಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ (ಗ್ರಾಮವಾರು ವಿವರ ಅನುಬಂಧ–1 ರಲ್ಲಿ ನೀಡಲಾಗಿದೆ).

ಆ) ಬಂದಿದೆ.

ಇ) 15 ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು 8 ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 7 ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇವೆ.

174 ಸಿಬ್ಬಂದಿಗಳ ಹುದ್ದೆ ಮಂಜೂರಾಗಿದ್ದು 120 ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 54 ಹುದ್ದೆಗಳು ಖಾಲಿ ಇವೆ. (ಮಾಹಿತಿಯನ್ನು ಅನುಬಂಧ–2 ರಲ್ಲಿ ನೀಡಲಾಗಿದೆ.)

ಈ) ಮತ್ತು ಉ) ಸದರಿ ಆಸ್ಪತ್ರೆಗಳಲ್ಲಿ ರೋಗಿಗಳಿಗೆ ತೊಂದರೆಯಾಗದಂತೆ ಲಭ್ಯವಿರುವ ವೈದ್ಯರು ಮತ್ತು ಸಿಬ್ಬಂದಿಗಳಿಂದ ಚಿಕಿತ್ಸೆ ನೀಡಲಾಗುತ್ತಿದೆ.

ಈ ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ವೈದ್ಯರು/ವೈದ್ಯರು ಮತ್ತು ಇತರೆ ಸಿಬ್ಬಂದಿ ವರ್ಗದವರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ವಿವರಗಳನ್ನು ಅನುಬಂಧ–3 ರಲ್ಲಿ ನೀಡಲಾಗಿದೆ.

ಅನುಬಂಧ–1

ಮತಕ್ಷೇತ್ರ	ತಾಲ್ಲೂಕು	ಸಮುದಾಯ ಆರೋಗ್ಯ ಕೇಂದ್ರ	ಪ್ರಾಥಮಿಕ ಆರೋಗ್ಯ ಕೇಂದ್ರಗಳು	ಉಪ ಕೇಂದ್ರಗಳು
	3	1	10	48
ದೇವರ ಹಿಪ್ಪರಗಿ	ಸಿಂಧಗಿ	ಕಲಗೇರಿ	1) ದೇವರ ಹಿಪ್ಪರಗಿ	1)ದೇವೂರ, 2)ಮುಳಸಾವಗಿ, 3)ಚಿಕ್ಕರೂಗಿ,
			2) ಕೋರವಾರ	4)ಹಿಟ್ಟರಿ.ಎಲ್.ಟಿ,
			3) ಅಸ್ಕಿ	5)ಗಂಗಟ್ಟ, 6) ಹಟರಕಿ, 7)ಹರನಾಳ 8) ಕಲಕೇರಿ.ಎ, 9)ಕಲಕೇರಿ 10) ಕರೊಟಗಿ 11) ಬಿ.ಬಿ.ಇಂಗಳಗಿ 12) ಬಿಂಕಲಭಾವಿ 13) ಅಲಗೂರ 14) ಅಸ್ಕಿ 15) ಬೇಟವಾಳ 16) ಆಗಂತಾಪೂರ 17) ಕೊರವಾರ 18) ಜಾಲವಾದ 19) ದೇವರ ಹಿಪ್ಪರಗಿ.ಎ 20) ದೇವರ ಹಿಪ್ಪರಗಿ.ಬಿ
	ಬಾಗೇವಾಡಿ	–	1) ಹೂವಿನ ಹಿಪ್ಪರಗಿ	1) ಹೂವಿನ ಹಿಪ್ಪರಗಿ.ಎ 2)ಹೂವಿನ ಹಿಪಪ್ರಗಿ.ಬಿ 3) 4) ನರಸಂಗಿ 5)ಕೆ.ನಾಲವಾಡಗಿ.ಎ 6) ಕೆ.ನಾಲವಾಡಗಿ.ಬಿ. 7) 8)ದೀಡವಾರ 9)ಇಂಗಳೇಶ್ವರ 10) ಸಾನನೂರ
			2) ಕೊಲಳ ವಾಡಗಿ	
			3) ನಾಗನೂರ	
			4) ರೂಡಗಿ	
			5) ಯಾಳವಾರ	

				11) ಹಲಸೂರ 12) ಹುನಿಹಾಳ 13) ವಡವರಗಿ.ಎ 14) ವಡವರಗಿ.ಬಿ 15) ಸಲೋಡಗಿ 16) ಬಕಾಳವಾರ 17) ಬೈರವಾಡ 18) 19) 20) ಭಮ್ಮನಳ್ಳಿ
	ಮುದ್ದೇಬಿಹಾಳ		1) ಕಾರಿಗನೂರ 2) ಬಂಟನೂರು	1) ದೊಮ್ಮನಹಳ್ಳಿ 2) ಕಾಗಿತೂರ 3) ಬಿ. ಸಾಲೋಡಗಿ 4) ಸಾವಡಗಿ 5) ಭಂಜೆನೂರ 6) ದೊಮನಾಳ 7) ಕುಂಬಗಿ 8) ಕುಂಬಗಿ.

ಪ್ರಶ್ನೆ ಸಂಖ್ಯೆ : 603

ಬಿಜಾಪುರ ಜಿಲ್ಲೆಯ ದೇವರ ಹಿಪ್ಪರಗಿ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸಿಬ್ಬಂದಿಗಳ ವಿವರ ಅನುಬಂಧ–2

ಹುದ್ದೆಗಳ ವಿವರ

ಕ್ರಮ ಸಂಖ್ಯೆ	ಹುದ್ದೆಗಳ ಪದನಾಮ	Sanction	Working	Vacant
1	ಹಿರಿಯ ಆರೋಗ್ಯ ಸಹಾಯಕ ಪುರುಷ	5	4	1
2	ಹಿರಿಯ ಮಹಿಳಾ ಆರೋಗ್ಯ ಸಹಾಯಕ	5	5	0
3	ಹಿರಿಯ ಪ್ರಶಾಲೆ ತಂತ್ರಜ್ಞರು	10	8	2
4	ಫಾರ್ಮಾಸಿಸ್ಟ್	11	11	0
5	ಕಿರಿಯ ಆರೋಗ್ಯ ಸಹಾಯಕ ಪುರುಷ	41	18	23

6	ಕಿರಿಯ ಆರೋಗ್ಯ ಸಹಾಯಕ ಮಹಿಳೆ	49	42	7
7	ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು	2	1	1
8	ಶುಶ್ರೂಷಕರು	9	3	6
9	ಪ್ರಥಮ ದರ್ಜೆ ಸಹಾಯಕ	4	2	2
10	ದ್ವಿತೀಯ ದರ್ಜೆ ಸಹಾಯಕರು	4	4	0
11	ವಾಹನ ಚಾಲಕರು	3	3	0
12	ಗ್ರೂಪ್ 'ಡಿ'	31	19	12
	ಒಟ್ಟು	**174**	**120**	**54**

ಅನುಬಂಧ – 3

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡಿರುವ/ತೆಗೆದುಕೊಳ್ಳಲಿರುವ ಕ್ರಮಗಳ ವಿವರ

1. ತಜ್ಞ ವೈದ್ಯರ ಖಾಲಿ ಹುದ್ದೆಗಳನ್ನು 2010 ರಲ್ಲಿ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬರುವ ವೈದ್ಯರಿಗೆ ಸ್ಥಳನಿಯುಕ್ತಿ ಮಾಡುವ ಮೂಲಕ ಆದ್ಯತಾನುಸಾರ ಭರ್ತಿ ಮಾಡಲು ಕ್ರಮವಹಿಸ ಲಾಗುವುದು.

2. (1) ಮಕ್ಕಳ ತಜ್ಞರು, (2) ಅರವಳಿಕೆ ತಜ್ಞರು ಹಾಗೂ (3) ಸ್ತ್ರೀರೋಗ ತಜ್ಞರುಗಳ ಕೊರತೆಯನ್ನು ನೀಗಿಸಲು ಮಾಸಿಕ ಗರಿಷ್ಟ ರೂ. 50,000 ರವರೆಗೆ ಗೌರವಧನ ನೀಡಿ ನೇಮಕ ಮಾಡಿಕೊಳ್ಳಲು ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನದ (ಎನ್.ಆರ್. ಹೆಚ್.ಎಂ.) ಅಡಿ ಅವಕಾಶ ಕಲ್ಪಿಸಲಾಗಿದೆ. ಹಾಗೂ ಇದೇ ಯೋಜನೆಯಡಿ ಪ್ರಕರಣವಾರು ಆಧಾರದ ಮೇಲೆ ಪ್ರತೀ ಪ್ರಕರಣವೊಂದಕ್ಕೆ (1) ಮಕ್ಕಳ ತಜ್ಞರಿಗೆ ರೂ.500, (2) ಅರೆವಳಿಕೆ

ತಜ್ಞರಿಗೆ ರೂ.1,000 ಹಾಗೂ (3) ಸ್ತ್ರೀರೋಗ ತಜ್ಞರಿಗೆ ರೂ.1,500 ರಂತೆ ನೀಡಲು ಸಹ ಅವಕಾಶ ಕಲ್ಪಿಸಲಾಗಿದೆ.

3. ಕರ್ನಾಟಕ ಆರೋಗ್ಯ ಪದ್ಧತಿ ಅಭಿವೃದ್ಧಿ ಸುಧಾರಣಾ ಯೋಜನೆ (ಕೆ.ಹೆಚ್.ಎಸ್.ಡಿ.ಆರ್.ಪಿ) ರ ಅಡಿಯಲ್ಲಿ ಮೇಲಿನ ಕ್ರಮ ಸಂಖ್ಯೆ:2 ರಲ್ಲಿ ತಿಳಿಸಿರುವ 3 ತಜ್ಞತೆಗಳನ್ನು ಹೊರತುಪಡಿಸಿ ಉಳಿದ ತಜ್ಞತೆಯಲ್ಲಿ ಮಾಸಿಕ ರೂ.5,000 ಗೌರವ ಧನ ನೀಡಿ ರಿಟ್ಯೈನರ್ ಶಿಪ್ ಆಧಾರದ ಮೇಲೆ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಇದೇ ಕೆ.ಹೆಚ್.ಎಸ್.ಆರ್.ಡಿ.ಪಿ. ಯೋಜನೆಯಡಿ, ಸದರಿ ತಜ್ಞರು ಹೊರರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ.1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ. ಆದರೆ ವಾರಕ್ಕೆ ಎರಡು ದಿನಕ್ಕೆ ಮಾತ್ರ ಅಂತಹ ಸೇವೆಯನ್ನು ಪಡೆಯಲು ಮಿತಿಗೊಳಿಸಲಾಗಿದೆ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು ಈ ಮೂಲಕ ಸ್ತ್ರೀ ರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ 5021 ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಆದ್ಯತಾನುಸಾರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು.

6. ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 562 ವೈದ್ಯರ ಹಾಗೂ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.

7. ಪ್ರಸ್ತುತ ಗ್ರೂಪ್–ಡಿ ನೌಕರರ ವೃಂದದಲ್ಲಿ ನೇಮಕಾತಿ ಮಾಡಲು ನಿಷೇಧವಿದ್ದು, ಅವಶ್ಯವಿರುವೆಡೆ ಬಾಹ್ಯ ಮೂಲಗಳಿಂದ ಸೇವೆ ಪಡೆದು ನಿರ್ವಹಿಸಲು ಕ್ರಮವಹಿಸಲಾಗಿದೆ.